# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಸೋಮವಾರ, ದಿನಾಂಕ: 15ನೇ ಡಿಸೆಂಬರ್, 2014

## (ಸಮಯ: ಮಧ್ಯಾಹ್ನ 12.15 ಗಂಟೆಗೆ)

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು:-

### 03. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2013**

**ಶ್ರೀ ರಾಮಲಿಂಗಾ ರೆಡ್ಡಿ** (ಮಾನ್ಯ ಸಾರಿಗೆ ಸಚಿವರು) ಅವರು:-

01. ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

02. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

### 04. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲೆ ಚರ್ಚೆ

**ಶ್ರೀಯುತರುಗಳಾದ:**
**ಕೆ.ಎಸ್. ಈಶ್ವರಪ್ಪ**
**ಅಮರನಾಥ ಪಾಟೀಲ್**
**ಶ್ರೀಮತಿ ತಾರಾಅನೂರಾಧ**
**ಕವಟಗಿಮಠ ಮಹಾಂತೇಶ್**
**ಮಲ್ಲಿಕಾರ್ಜುನ ಹಾಗೂ**
**ಅರುಣ ಶಹಾಪುರ**

ಉತ್ತರ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿ ಹಾಗೂ ಆರ್ಥಿಕ ಪುನ:ಶ್ಚೇತನಕ್ಕೆ ಅತ್ಯಂತ ಅಗತ್ಯವಿರುವ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು.

## ೦೫. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರು ಬೆಳಗಾವಿ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಚಾಲಿತ ಮಗ್ಗಗಳನ್ನು ಸ್ಥಾಪಿಸಲು ಸರ್ಕಾರವು ಸಬ್ಸಿಡಿ ನೀಡಿ ಯೋಜನೆಯನ್ನು ಅನುಷ್ಠಾನಕ್ಕೆ ತಂದಿದ್ದರೂ ಸಹ ಬೆಳಗಾವಿ ನಗರ ಸಭೆಯ ಅಧಿಕಾರಿಗಳು ಅನುಮತಿ ನೀಡದಿರುವುದರಿಂದ ಬಡ ನೇಕಾರರಿಗೆ ಅನ್ಯಾಯವಾಗುತ್ತಿರುವ ಬಗ್ಗೆ **ಮಾನ್ಯ ನಗರಾಭಿವೃದ್ಧಿ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀಯುತರುಗಳಾದ: ವೈ.ಎ. ನಾರಾಯಣಸ್ವಾಮಿ, ಗೋ. ಮಧುಸೂದನ್ ಹಾಗೂ ಅಶ್ವಥನಾರಾಯಣ** ಅವರುಗಳು ರಾಜ್ಯದಲ್ಲಿ ಯೂರಿಯಾ, ಮರಗೆಣಿಸಿನಪುಡಿ ಹಾಗೂ ಮತ್ತಿತರ ರಾಸಾಯನಿಕಗಳನ್ನೊಳಗೊಂಡ ಕಲಬೆರಕೆ ಹಾಲು ಮಾರಾಟವಾಗುತ್ತಿರುವುದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಇಂತಹ ಅಪರಾಧಗಳನ್ನು ಎಸಗುತ್ತಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ **ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

ಇ) **ಶ್ರೀ ಸೋಮಣ್ಣ ಮ. ಬೇವಿನಮರದ** ಅವರು ರಾಜ್ಯಾದ್ಯಂತ ಹಾಗೂ ಹಾವೇರಿ ಜಿಲ್ಲೆಯಲ್ಲಿ ಈರುಳ್ಳಿ ಬೆಳೆಗಾರರು ನಷ್ಟಕ್ಕೆ ಒಳಗಾಗಿರುವ ಹಿನ್ನೆಲೆಯಲ್ಲಿ ಈರುಳ್ಳಿ ಬೆಳೆಗೆ ಬೆಂಬಲ ಬೆಲೆಯನ್ನು ನಿಗದಿಗೊಳಿಸುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ** ಗಮನ ಸೆಳೆಯುವುದು.

ಈ) **ಶ್ರೀ ಬಸವರಾಜ ಹೊರಟ್ಟಿ** ಅವರು ಕರ್ನಾಟಕ ರಾಜ್ಯ ಹಿರಿಯ ನಾಗರೀಕರ ಕ್ಷೇಮಾಭಿವೃದ್ಧಿ ಮತ್ತು ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘದ ವಿವಿಧ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ** ಗಮನ ಸೆಳೆಯುವುದು.

## ೦೬. ನಿಯಮ ೩೩೦ರ ಮೇರೆಗೆ

ಅ) **ಶ್ರೀ ಪಟೇಲ್ ಶಿವರಾಂ** ಅವರು ರಾಜ್ಯದಲ್ಲಿ ಹುಚ್ಚು ನಾಯಿ ಕಡಿತ ಹಾಗೂ ಹಾವು ಕಡಿತಕ್ಕೆ ಒಳಗಾಗಿರುವ ರೋಗಿಗಳಿಗೆ ಸರ್ಕಾರಿ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಜೀವನಿರೋಧಕ ಔಷಧಿ ಹಾಗೂ ಲಸಿಕೆಗಳು ಲಭ್ಯವಿಲ್ಲದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಆ) **ಶ್ರೀ ಮರಿತಿಬ್ಬೇಗೌಡ** ಅವರು ರಾಜ್ಯದಲ್ಲಿ ಪ್ರಸಕ್ತ ರೈತರು ರಾಸಾಯನಿಕ ಮತ್ತು ಸಾವಯವ ಕೃಷಿ ಪದ್ಧತಿ ಬಳಕೆ ಮಾಡಿ ಬೆಳೆಗಳನ್ನು ಬೆಳೆಯುತ್ತಿದ್ದು, ಇದರಿಂದಾಗಿ ಕೃಷಿ ಉತ್ಪಾದನೆ, ಸಾರ್ವಜನಿಕರಲ್ಲಿ ಆರೋಗ್ಯ ಹಾಗೂ ಭೂಮಿಯ ಫಲವತ್ತತೆ ಮೇಲೆ ವ್ಯತಿರಿಕ್ತ ಪರಿಣಾಮಗಳು ಉಂಟಾಗುತ್ತಿರುವುದರಿಂದ, ಶೂನ್ಯ ಬಂಡವಾಳದ ನೈಸರ್ಗಿಕ ಕೃಷಿ ಪದ್ಧತಿಯನ್ನು ಜಾರಿಗೆ ತರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕೃಷಿ ರಾಜ್ಯ ಸಚಿವರು)**

ಇ) **ಶ್ರೀಯುತರುಗಳಾದ: ಕೋಟ ಶ್ರೀನಿವಾಸ ಪೂಜಾರಿ ಹಾಗೂ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** ಅವರುಗಳು ಕರ್ನಾಟಕ ರಾಜ್ಯ ಪಂಚಾಯತ್ ರಾಜ್ ತಿದ್ದುಪಡಿ ವರದಿಯ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

**ವಿ. ಶ್ರೀಶ್**
**ಕಾರ್ಯದರ್ಶಿ**

---